## ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಮೈಸೂರು

## ರಾಷ್ಟ್ರೀಯ ಕ್ರೀಡಾ ದಿನಾಚರಣೆ

ಮೈಸೂರು : ಕ್ರೀಡಾಕೂಟಗಳು ಕ್ರೀಡಾಪಟುಗಳಲ್ಲಿ ಸ್ಪರ್ಧಾ ಮನೋಭಾವ ಮೂಡಿಸುವಲ್ಲಿ ಸಹಕಾರಿಯಾಗಲಿವೆ ಎಂದು ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಪ್ರಾಂಶುಪಾಲ ಡಾ.ಅಣ್ಣೇಗೌಡ ತಿಳಿಸಿದರು.



ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ವತಿಯಿಂದ ಮಹಾರಾಣಿ ಮಹಿಳಾ ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜುಗಳ ಅಧ್ಯಾಪಕರು ಮತ್ತು ಅಧ್ಯಾಪಕೇತರ ಸಿಬ್ಬಂದಿಗಾಗಿ ಮಹಾರಾಜ ಜೂನಿಯರ್ ಕಾಲೇಜು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ನೇಹ ಪೂರ್ವಕ ಏಕದಿನ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡಾ ದಿನಾಚರಣೆ ಅಂಗವಾಗಿ ಅಧ್ಯಾಪಕರು ಮತ್ತು ಅಧ್ಯಾಪಕೇತರ ಸಿಬ್ಬಂದಿಗಾಗಿ ಕ್ರೀಡಾ ಕೂಟ ಆಯೋಜಿಸಿರುವುದು ಅರ್ಥಪೂರ್ಣವಾಗಿದೆ. ಸ್ಪರ್ಧೆಗಳಲ್ಲಿ ಸೋಲು–ಗೆಲುವು ಮುಖ್ಯವಲ್ಲ, ಮೂರು ಕಾಲೇಜುಗಳ ಸಿಬ್ಬಂದಿ ಸ್ಪರ್ಧೆಯಲ್ಲಿ ಪಾಲ್ಗೊಂಡಿರುವುದು ಒಳ್ಳೆಯ ಬೆಳವಣಿಗೆ. ಈ ರೀತಿಯ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದರು.

ಮಹಾರಾಣಿ ಕಲಾ ಕಾಲೇಜು ಪ್ರಾಂಶುಪಾಲರಾದ ಬಿ.ಜೆ.ವಿಜಯ್ ಮಾತನಾಡಿ, ಈ ಹಿಂದೆ ಮಹಾರಾಣಿ ಕಾಲೇಜಿನಲ್ಲಿ ಅಧ್ಯಾಪಕರು ಮತ್ತು ಸಿಬ್ಬಂದಿಗಾಗಿ ಕ್ರಿಕೆಟ್ ಪಂದ್ಯಾವಳಿ ಏರ್ಪಡಿಸಲಾಗುತ್ತಿತ್ತು. ಕಾರಣಾಂತರದಿಂದ ಕೆಲ ವರ್ಷಗಳಿಂದ ಸ್ಥಗಿತಗೊಂಡಿತ್ತು. ಇದೀಗ ಮತ್ತೆ ಆರಂಭಗೊಂಡಿರುವುದು ಆಶಾದಾಯಕ ಬೆಳವಣಿಗೆ ಎಂದು ಹೇಳಿದರು.

ಪಂದ್ಯಾವಳಿಯಲ್ಲಿ ಮಹಾರಾಣಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನ ತಂಡಗಳು ಭಾಗವಹಿಸಿದ್ದವು. ಕ್ರೀಡಾಕೂಟದಲ್ಲಿ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು ತಂಡ ಪ್ರಥಮ ಸ್ಥಾನವನ್ನು ಪಡೆಯಿತು. ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕರಾದ ಎಂ.ಎಸ್.ನಾಗಣ್ಣ, ಕಲಾ ಕಾಲೇಜು ದೈಹಿಕ ನಿರ್ದೇಶಕಿ ಸಂಗೀತ, ವಿಜ್ಞಾನ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕಿ ರಮಣಿ,

ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ಪ್ರೊ.ಎಂ.ಶಿವಣ್ಣ, ಪ್ರೊ.ಸೋಮಣ್ಣ, ಪಿ.ಶಿವಣ್ಣ, ಎನ್.ಎಸ್.ಎಸ್. ಅಧಿಕಾರಿ ಡಾ.ಕಂಚಿನಕೆರೆ ಗೋವಿಂದೇಗೌಡ ಸೇರಿದಂತೆ ಮೂರೂ ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದ್ದರು.